ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ: ಇಡಿ/ಕೆಇಎ/26/ನೇ.ವಿ/2026(ಆರ್.ಪಿ.ಸಿ) ದಿನಾಂಕ : 19.10.2026

## ಪ್ರಕಟಣೆ

**ಕಂದಾಯ ಇಲಾಖೆಯಲ್ಲಿನ ಉಳಿಕೆ ಮೂಲ ವೃಂದದ ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳಿಗೆ ಪ್ರಾಧಿಕಾರದಿಂದ ನಡೆಸಲಾದ ಸ್ಪರ್ಧಾತ್ಮಕ ಪರೀಕ್ಷೆಯ ತಾತ್ಕಾಲಿಕ ಫಲಿತಾಂಶ ಪ್ರಕಟಿಸಿರುವ ಬಗ್ಗೆ.**

-----

ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಉಳಿಕೆ ಮೂಲ ವೃಂದದ ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳ ನೇಮಕಾತಿ ಸಂಬಂಧ ದಿನಾಂಕ: 04.10.2026 ರಂದು ನಡೆದ ಪತ್ರಿಕೆ–1 ಮತ್ತು ಪತ್ರಿಕೆ–2 ರ ಸ್ಪರ್ಧಾತ್ಮಕ ಪರೀಕ್ಷೆಗಳ ಕೀ ಉತ್ತರಗಳನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ದಿನಾಂಕ: 06.10.2026 ರಂದು ಪ್ರಕಟಿಸಲಾಗಿರುತ್ತದೆ. ಪ್ರಕಟಿಸಿರುವ ಕೀ ಉತ್ತರಗಳಿಗೆ ಆಕ್ಷೇಪಣೆಗಳಿದ್ದಲ್ಲಿ ದಿನಾಂಕ: 08.10.2026ರ ಬೆಳಿಗ್ಗೆ 10:30 ಗಂಟೆಯೊಳಗೆ ಸಲ್ಲಿಸಲು ಕಾಲಾವಕಾಶ ನೀಡಲಾಗಿತ್ತು.

ಅದರಂತೆ ಸ್ವೀಕೃತವಾದ ಆಕ್ಷೇಪಣೆಗಳನ್ನು ವಿಷಯ ತಜ್ಞರ ಸಮಿತಿಯ ಮೂಲಕ ಪರಿಶೀಲಿಸಿ ಪರಿಷ್ಕೃತ ಕೀ ಉತ್ತರಗಳನ್ನು ದಿನಾಂಕ 16.10.2026 ರಂದು ಪ್ರಕಟಿಸಲಾಗಿದ್ದು, ಸದರಿ ಪರಿಷ್ಕೃತ ಕೀ ಉತ್ತರಗಳನ್ವಯ ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ತಾತ್ಕಾಲಿಕ ಫಲಿತಾಂಶವನ್ನು ದಿನಾಂಕ 19.10.2026 ರಂದು ಪ್ರಕಟಿಸಲಾಗಿದೆ

ಪ್ರಕಟಿತ ತಾತ್ಕಾಲಿಕ ಫಲಿತಾಂಶಕ್ಕೆ ಆಕ್ಷೇಪಣೆಗಳಿದ್ದಲ್ಲಿ ದಿನಾಂಕ 22.10.2026 ಬೆಳಿಗ್ಗೆ 10.00 ರೊಳಗೆ ನಿಗದಿತ ಲಿಂಕ್ (https://cetonline.karnataka.gov.in/kea/) ಮೂಲಕ ಪೂರಕ ದಾಖಲೆಗಳೊಂದಿಗೆ ಸಲ್ಲಿಸತಕ್ಕದ್ದು. ಪೂರಕ ದಾಖಲೆಗಳಿಲ್ಲದ ಹಾಗೂ ಕೀ ಉತ್ತರಗಳಿಗೆ ಸಲ್ಲಿಸಲಾಗುವ ಆಕ್ಷೇಪಣೆಗಳನ್ನು ಈ ಹಂತದಲ್ಲಿ ಪರಿಗಣಿಸಲಾಗುವುದಿಲ್ಲ.

ಕಾರ್ಯನಿರ್ವಾಹಕ ನಿರ್ದೇಶಕರು

**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**
18th Cross, Sampige Road, Malleshwaram, Bengaluru - 560 012.
Phone: 080 - 23 564 583 Helpline : 080 - 23 460 460.
e-mail : keauthority-ka@nic.in Website : http://kea.kar.nic.in